**ಕರ್ನಾಟಕ ವಿಧಾನಸಭೆ**
**ಹದಿನಾರನೇ ವಿಧಾನಸಭೆ**
**ಎರಡನೇ ಅಧಿವೇಶನ**

# ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ವಿಧೇಯಕ, 2023

## (2023ರ ವಿಧಾನಸಭೆಯ ವಿಧೇಯಕ ಸಂಖ್ಯೆ–30)

ಕರ್ನಾಟಕ ಉಚ್ಚನ್ಯಾಯಾಲಯ ಅಧಿನಿಯಮ, 1961ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಉಚ್ಚನ್ಯಾಯಾಲಯ ಅಧಿನಿಯಮ, 1961 (1962ರ ಕರ್ನಾಟಕ ಅಧಿನಿಯಮ 05)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಉಚ್ಚನ್ಯಾಯಾಲಯ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆಬರತಕ್ಕದ್ದು.

**2. 2ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಉಚ್ಚನ್ಯಾಯಾಲಯ ಅಧಿನಿಯಮ, 1961 (1962ರ ಕರ್ನಾಟಕ ಅಧಿನಿಯಮ 05)ರ (ಇದರಲ್ಲಿ ಇನ್ನುಮುಂದೆ ಮೂಲ ಅಧಿನಿಯಮ ಎಂದು ಕರೆಯಲಾಗಿದೆ) 2ನೇ ಪ್ರಕರಣದಲ್ಲಿ,-

(i) (3)ನೇ ಉಪ ಪ್ರಕರಣದ ಬದಲಾಗಿ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಎಂದರೆ:-

"(3) "ಮೊದಲನೆಯ ಅಪೀಲು" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೇರೆಗೆ, ಸಿವಿಲ್ ಪ್ರಕ್ರಿಯಾ ಸಂಹಿತೆ 104ನೇ ಪ್ರಕರಣದ ಅಡಿಯಲ್ಲಿ ಅಧೀನ ಸಿವಿಲ್ ನ್ಯಾಯಾಲಯದ ಮೂಲಕ ಅಪೀಲು ಸಲ್ಲಿಸಬಹುದಾದ ಯಾವುದೇ ಆದೇಶಗಳು ಸೇರಿದಂತೆ, ಸಿಟಿ ಸಿವಿಲ್ ನ್ಯಾಯಾಧೀಶರು ಮೂಲ ಅಧಿಕಾರ ವ್ಯಾಪ್ತಿಯನ್ನು ಚಲಾಯಿಸಿ ಹೊರಡಿಸಿದ ತೀರ್ಪು, ಡಿಕ್ರಿ ಅಥವಾ ಆದೇಶದ ವಿರುದ್ಧ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗುವ ಅಪೀಲು;"

(ii) (6)ನೇ ಉಪ ಪ್ರಕರಣದ ಬದಲಾಗಿ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು ಎಂದರೆ:-

"(6) "ಎರಡನೆಯ ಅಪೀಲು" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೇರೆಗೆ, ಯಾವುದೇ ಸೀನಿಯರ್ ಸಿವಿಲ್ ನ್ಯಾಯಾಧೀಶರು ಅಥವಾ ಜಿಲ್ಲಾ ನ್ಯಾಯಾಧೀಶರು ತಮ್ಮ ಅಪೀಲು ಅಧಿಕಾರ ವ್ಯಾಪ್ತಿಯನ್ನು ಚಲಾಯಿಸಿ ಹೊರಡಿಸಿದ ತೀರ್ಪು, ಡಿಕ್ರಿ ಅಥವಾ ಆದೇಶದ ವಿರುದ್ಧ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗುವ ಅಪೀಲು;"

**3. 5ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 5ನೇ ಪ್ರಕರಣದಲ್ಲಿನ ಖಂಡ (i)ರ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(i) ಎಲ್ಲಾ ಮೊದಲನೆಯ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಏಕ ನ್ಯಾಯಾಧೀಶರ ಪೀಠದ ಮೂಲಕ ವಿಚಾರಣೆ ನಡೆಸತಕ್ಕದ್ದು."

**4. 6ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 6ನೇ ಪ್ರಕರಣದ ಬದಲಿಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"**6**. **ಎರಡನೇ ಅಪೀಲುಗಳು**.- ಎಲ್ಲಾ ಎರಡನೇ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ನ್ಯಾಯಾಧೀಶರ ಪೀಠದ ಮೂಲಕ ವಿಚಾರಣೆ ನಡೆಸತಕ್ಕದ್ದು."

**5. ತೊಂದರೆಗಳನ್ನು ನಿವಾರಿಸುವ ಅಧಿಕಾರ.-** ಈ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಕರ್ನಾಟಕ ಉಚ್ಚ ನ್ಯಾಯಾಲಯ ಅಧಿನಿಯಮ, 1961ರ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದರೆ, ರಾಜ್ಯ ಸರ್ಕಾರವು, ಸನ್ನಿವೇಶವು ಉದ್ಭವಿಸಿದಂತೆ ಸರ್ಕಾರಿ ರಾಜ್ಯಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ಈ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಕರ್ನಾಟಕ ಉಚ್ಚ ನ್ಯಾಯಾಲಯ ಅಧಿನಿಯಮ, 1961ರ ಉಪಬಂಧಗಳಿಗೆ ಅಸಂಗತವಾಗದ, ತೊಂದರೆಗಳನ್ನು ನಿವಾರಿಸುವ ಉದ್ದೇಶಕ್ಕಾಗಿ ಅವಶ್ಯಕ ಅಥವಾ ಸಮಯೋಚಿತವೆಂದು ಕಂಡುಬರುವಂಥ ಯಾವುದೇ ಕಾರ್ಯವನ್ನು ಮಾಡಬಹುದು:

ಪರಂತು, ಈ ಅಧಿನಿಯಮದ ಆರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಕ್ತಾಯಗೊಂಡ ತರುವಾಯ ಯಾವುದೇ ಅಂಥ ಆದೇಶವನ್ನು ಮಾಡತಕ್ಕದ್ದಲ್ಲ.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ತ್ವರಿತ ವಿಲೇವಾರಿ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಮಾನ್ಯ ಕರ್ನಾಟಕ ಕಾನೂನು ಆಯೋಗವು ದಿನಾಂಕ 03.10.2023ರ ಸಂಖ್ಯೆ ಎಲ್‌ಸಿಕೆ/ಸಂಕೀರ್ಣ ಸಂಖ್ಯೆ 10/2023ರ ತನ್ನ ಅಭಿಪ್ರಾಯದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯ ಅಧಿನಿಯಮ, 1961 (1962ರ ಕರ್ನಾಟಕ ಅಧಿನಿಯಮ 05) ಕ್ಕೆ ಕೆಲವು ತಿದ್ದುಪಡಿಗಳನ್ನು ಶಿಫಾರಸ್ಸು ಮಾಡಿದೆ.

ಆದ್ದರಿಂದ, "ಮೊದಲನೇ ಅಪೀಲು" ಮತ್ತು "ಎರಡನೇ ಅಪೀಲು" ಎಂಬ ಪದಗಳನ್ನು ಪುನ: ಪರಿಭಾಷಿಸಲು ಮತ್ತು ಕೆಲವು ತತ್ಪರಿಣಾಮದ ತಿದ್ದುಪಡಿಗಳನ್ನು ತರಲು ಕರ್ನಾಟಕ ಉಚ್ಚನ್ಯಾಯಾಲಯ ಅಧಿನಿಯಮ, 1961 (1962ರ ಕರ್ನಾಟಕ ಅಧಿನಿಯಮ 05)ನ್ನು ತಿದ್ದುಪಡಿ ಮಾಡುವುದು ಅಗತ್ಯವೆಂದು ಪರಿಗಣಿಸಲಾಗಿದೆ.

ಆದ್ದರಿಂದ, ಈ ವಿಧೇಯಕ.

.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಎಚ್.ಕೆ ಪಾಟೀಲ್**
ಕಾನೂನು, ನ್ಯಾಯ ಮಾನವ ಹಕ್ಕುಗಳು
ಮತ್ತು ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಉಚ್ಚನ್ಯಾಯಾಲಯ ಅಧಿನಿಯಮ, 1961

## (1962ರ ಕರ್ನಾಟಕ ಅಧಿನಿಯಮ ಸಂಖ್ಯೆ 05)ರ ಉದ್ಧೃತ ಭಾಗ

**XX XX XX**

**2. ಪರಿಭಾಷೆಗಳು:** ಈ ಅಧಿನಿಯಮದಲ್ಲಿ,- **XX XX XX**

(3) ``ಮೊದಲನೆಯ ಅಪೀಲು'' ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೇರೆಗೆ, ಯಾವುದೇ ಕೆಳಗಿನ ಹಂತದ ಸಿವಿಲ್ ನ್ಯಾಯಾಯವು ತನ್ನ ಮೂಲ ಸಿವಿಲ್ ಅಧಿಕಾರ ವ್ಯಾಪ್ತಿಯನ್ನು ಚಲಾಯಿಸಿ ಹೊರಡಿಸಿದ ತೀರ್ಪು, ಡಿಕ್ರಿ ಅಥವಾ ಆದೇಶದ ಮೇಲೆ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗುವ ಅಪೀಲು;

**XX XX XX**

(6) ``ಎರಡನೆಯ ಅಪೀಲು'' ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೇರೆಗೆ, ಕೆಳಗಿನ ಹಂತದ ಯಾವುದೇ ಸಿವಿಲ್ ನ್ಯಾಯಾಲಯವು ತನ್ನ ಅಪೀಲು ಸಿವಿಲ್ ಅಧಿಕಾರ ವ್ಯಾಪ್ತಿಯನ್ನು ಚಲಾಯಿಸಿ ಹೊರಡಿಸಿದ ತೀರ್ಪು, ಡಿಕ್ರಿ ಅಥವಾ ಆದೇಶದ ಮೇಲೆ ಉಚ್ಚ ನ್ಯಾಯಾಲಯಕ್ಕೆ ಸಲ್ಲಿಸಲಾಗುವ ಅಪೀಲು.

**XX XX XX**

**5. ಮೊದಲನೆಯ ಅಪೀಲುಗಳು.-** ಈ ಅಧಿನಿಯಮದಲ್ಲಿ ಅನ್ಯಥಾ ಉಪಬಂಧಿಸಿರುವುದನ್ನು ಹೊರತುಪಡಿಸಿ,-

(i) ಹದಿನೈದು ಲಕ್ಷ ರೂಪಾಯಿಗಳು ಅಥವಾ ಅದಕ್ಕೂ ಹೆಚ್ಚಿನ ಮೌಲ್ಯದ ವಿಷಯದ ಸಂಬಂಧದಲ್ಲಿನ ದಾವೆ ಅಥವಾ ಇತರ ವ್ಯವಹರಣೆಗಳಲ್ಲಿ ಹೊರಡಿಸಲಾದ ಡಿಕ್ರಿ ಅಥವಾ ಆದೇಶದ ವಿರುದ್ಧದ ಎಲ್ಲಾ ಮೊದಲನೆಯ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಇಬ್ಬರಿಗಿಂತ ಕಡಿಮೆ ಇಲ್ಲದ ನ್ಯಾಯಾಧೀಶರುಗಳನ್ನು ಒಳಗೊಂಡ ನ್ಯಾಯಪೀಠವು ವಿಚಾರಣೆ ನಡೆಸತಕ್ಕುದು ಮತ್ತು ಮೊದಲನೆಯ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಏಕ ನ್ಯಾಯಾಧೀಶ ಪೀಠವು ವಿಚಾರಣೆ ನಡೆಸತಕ್ಕುದು.

(ii) ಮರಣದಂಡನೆ ಅಥವಾ ಕಾರಾವಾಸದ ಶಿಕ್ಷೆ ನೀಡಿದ ತೀರ್ಪುಗಳ ವಿರುದ್ಧ ಮತ್ತು ಮರಣ ದಂಡನೆ ಅಥವಾ ಆಜೀವ ಕಾರಾವಾಸದಿಂದ ಶಿಕ್ಷಿಸಬಹುದಾದ ಅಪರಾಧಗಳ ಮೊಕದ್ದಮೆಗಳಲ್ಲಿ ಖುಲಾಸೆ ಮಾಡಿರುವ ತೀರ್ಪುಗಳ ವಿರುದ್ಧದ ಎಲ್ಲ ಕ್ರಿಮಿನಲ್ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಇಬ್ಬರು ನ್ಯಾಯಾಧೀಶರಿಗಿಂತ ಕಡಿಮೆಯಿಲ್ಲದ ನ್ಯಾಯಾಧೀಶರನ್ನು ಒಳಗೊಂಡ ಒಂದು ನ್ಯಾಯಪೀಠವು ವಿಚಾರಣೆ ನಡೆಸತಕ್ಕುದು ಮತ್ತು ಇತರ ಕ್ರಿಮಿನಲ್ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಏಕ ನ್ಯಾಯಾಧೀಶ ಪೀಠವು ವಿಚಾರಣೆ ನಡೆಸತಕ್ಕುದು.

**XX XX XX**

**6. ಎರಡನೆಯ ಅಪೀಲುಗಳು.-** ಎಲ್ಲಾ ಎರಡನೆಯ ಅಪೀಲುಗಳನ್ನು ಉಚ್ಚ ನ್ಯಾಯಾಲಯದ ಏಕ ನ್ಯಾಯಾಧೀಶ ಪೀಠವು ವಿಚಾರಣೆ ಮಾಡತಕ್ಕುದು ಮತ್ತು ಇತ್ಯರ್ಥ ಮಾಡತಕ್ಕುದು:

ಪರಂತು, ನ್ಯಾಯಾಧೀಶರು, ಮೊಕದ್ದಮೆಯು ಕಾನೂನಿನ ಗಮನಾರ್ಹ ಪ್ರಶ್ನೆಯನ್ನೊಳಗೊಂಡಿದೆ ಅಥವಾ ನ್ಯಾಯೋದ್ದೇಶದ ದೃಷ್ಟಿಯಿಂದ ಆ ಮೊಕದ್ದಮೆಯು ನ್ಯಾಯಾಧೀಶರುಗಳ ಪೀಠದಿಂದ ವಿಚಾರಣೆಯಾಗಬೇಕು ಮತ್ತು ಇತ್ಯರ್ಥವಾಗಬೇಕು ಎಂಬ ಬಗ್ಗೆ ತಮಗೆ ಮನದಟ್ಟಾದರೆ ಆ ಎರಡನೇ ಅಪೀಲನ್ನು ಅಂಥ ಪೀಠಕ್ಕೆ ವಿಚಾರಣೆಗಾಗಿ ಮತ್ತು ಇತ್ಯರ್ಥಕ್ಕಾಗಿ ಕಳುಹಿಸಬಹುದು.

**XX XX XX**

ಸರ್ಕಾರಿ ಮುದ್ರಣಾಲಯ, ಸುವರ್ಣ ವಿಧಾನಸೌಧ, ಬೆಳಗಾವಿ, ಪಿ7, ಕಾಸೂ , ಪ್ರತಿಗಳು 600, 12ನೇ ಡಿಸೆಂಬರ್ 2023